ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 3/2/2021

3/2/21

# ಕಲ್ಲುಕ್ವಾರಿ ನಿಷೇಧ ಅಸಾಧ್ಯ



ವಿಧಾನಸಭೆ: ರಾಜ್ಯದಲ್ಲಿ ಕಲ್ಲುಕ್ವಾರಿ ಸಂಪೂರ್ಣ ನಿಷೇಧ ಅಸಾಧ್ಯ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಅಧಿಕೃತ ಪರವಾನಗಿ ಪಡೆದಿರುವ ಗಣಿ ಹಾಗೂ ಕಲ್ಲುಕ್ವಾರಿಗಳ ಮೇಲೆ ಯಾವುದೇ ರೀತಿಯ ಕಾನೂನು ಕ್ರಮ ಜರುಗಿಸಬಾರದೆಂದು ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ವಿಧಾನಸಭೆಗೆ ತಿಳಿಸಿದರು. ಕಾನೂನು ಬಾಹಿರವಾಗಿ ಕಲ್ಲುಕ್ವಾರಿ ಇಲ್ಲವೇ ಗಣಿಗಾರಿಕೆ ಚಟುವಟಿಕೆ ನಡೆಯುತ್ತಿದ್ದರೆ ಮುಲಾಜಿಲ್ಲದೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ. ಕಾನೂನು ಮತ್ತು ನ್ಯಾಯಬದ್ಧವಾಗಿದ್ದರೆ ಯಾರೂ ಕೂಡ ತಲೆ ಕೆಡಿಸಿಕೊಳ್ಳಬೇಕಾದ ಅಗತ್ಯವಿಲ್ಲ ಎಂದರು.